# ವೃದ್ಧನ ಕೊಲೆ ಆರೋಪಿಗಳ ಬಂಧನ, ಆಭರಣ ವಶ

**ರಾಯಚೂರು:** ನಗರದಲ್ಲಿ ಎರಡು ದಿನಗಳ ಹಿಂದೆ ವೃದ್ಧನನ್ನು ಕೊಲೆಗೈದು, ಆಭರಣ ದೋಚಿ ಪರಾರಿಯಗಿದ್ದ ಆರೋಪಿಗಳನ್ನು ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಅಖೀಲೇಶ ಮತ್ತು ಗೌತಮ್ ಬಂಧಿತ ಆರೋಪಿಗಳು. ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ನಿಖಿಲ್ ಮಾತನಾಡಿ, ಇತ್ತೀಚೆಗೆ ನಿಜಲಿಂಗಪ್ಪ ಕಾಲನಿಯಲ್ಲಿ ಪಂಪಾಪತಿ ಎಂಬ ವೃದ್ಧನನ್ನು ಕೊಲೆಗೈದು, ಆಭರಣ ಮತ್ತು ನಗದು ದೋಚಿ ಪರಾರಿಯಾಗಿದ್ದರು.

ಮನೆಯಲ್ಲಿ ಒಬ್ಬರೆ ಇರುವ ವೃದ್ದನನ್ನು ಗಮನಿಸಿದ ಅರೋಪಿಗಳು ಈ ಕುಕೃತ್ಯ ನಡೆಸಿದ್ದು ಮನೆಯ ಂಬಾಗಿಲಿನಿಂದ ಪ್ರವೇಶಿಸಿ ಕುತ್ತಿಗೆಗೆ ಹರಿತವಾದ ಆಯುಧದಿಂದ ಕೊಲೆ ಮಾಡಿ ಮನೆಯ ಕಪಾಟಿನಲ್ಲಿದ್ದ ನಗದು ಮತ್ತು ಚಿನ್ನಾಭರಣ ದೋಚಿದ್ದರು ಎಂದ ಅವರು ಘಟನೆ ಬಳಿಕ ತತಕ್ಷಣ ಕಾರ್ಯ ಪ್ರವೃತ್ತರಾದ ಪಶ್ಚಿಮ ಠಾಣೆ ಪೊಲೀಸರು ಘಟನೆ ನಡೆದು ಎರೆಡು ದಿನದಲ್ಲಿ ಅರೋಪಿಗಳನ್ನು ಬಂಧಿಸಿ ಚಿನ್ನಾಭರಣವನ್ನು ವಶಕ್ಕೆ ಪಡೆದಿದ್ದಾರೆ ಎಂದರು.

ಎಎಸ್‌ಪಿ ಹರಿಬಾಬು, ಡಿಎಸ್‌ಪಿ ಶಿವನಗೌಡ ಪಾಟೀಲ, ಸಿಪಿಐ ವೀರಾರೆಡ್ಡಿ, ಪಿಎಸ್‌ಐ ಫಸಿಯುದ್ದೀನ್, ರಾಜಕುಮಾರ್ ಭಜಂತ್ರಿ, ಮಂಜುನಾಥ, ಬಸವರಾಜ, ಸಿಬ್ಬಂದಿಯಿದ್ದರು.

## ಜಾರಕಿಹೊಳಿ ಸಹೋದರರ ವಿರುದ್ಧ ಶಿಸ್ತು ಕ್ರಮ ಏಕಿಲ್ಲ?

**ಬೆಂಗಳೂರು:** ಲಖನ್ ಬಂಡಾಯದ ಹಿನ್ನೆಲೆಯಲ್ಲಿ ಬಾಲಚಂದ್ರ ಹಾಗೂ ರಮೇಶ ಜಾರಕಿಹೊಳಿ ವಿರುದ್ಧ ಶಿಸ್ತು ಕ್ರಮಕೈಗೊಳ್ಳುವ ಧೈರ್ಯ ಬಿಜೆಪಿಗೆ ಇದೆಯೇ ಎಂದು ಕಾಂಗ್ರೆಸ್ ಪ್ರಶ್ನಿಸಿದೆ.

ಈ ವಿಚಾರವಾಗಿ ಬುಧವಾರ ಟ್ವೀಟ್ ಮಾಡಿರುವ ಕರ್ನಾಟಕ ಕಾಂಗ್ರೆಸ್, ಎತ್ತಿಗೆ ಜ್ವರ ಬಂದರೆ ಎಮ್ಮೆಗೆ ಬರೆ ಎಂಬಂತೆ ಮಂಥರ್‌ಗೌಡ ಕಾಂಗ್ರೆಸ್‌ನಿಂದ ಸ್ಪರ್ಧಿಸುತ್ತಿರುವುದಕ್ಕೆ ಎ.ಮಂಜು ವಿರುದ್ಧ ಬಿಜೆಪಿಯು ಶಿಸ್ತುಕ್ರಮ ಕೈಗೊಂಡಿದೆ. ಬಾಲಚಂದ್ರ ಹಾಗೂ ರಮೇಶ ಜಾರಕಿಹೊಳಿ ವಿರುದ್ಧವೂ ಇದೇ ಶಿಸ್ತು ಕ್ರಮ ಕೈಗೊ ಳ್ಳುವ ಧೈರ್ಯ ಬಿಜೆಪಿಗೆ ಇದೆಯೇ ಅಥವಾ ಉತ್ತರನ ಪುರುಷ ಒಲೆಯ ಮುಂದೆ ಮಾತ್ರವೇ? ಎಂದು ಟ್ವೀಟಿಸಿದೆ. ಬೆಳಗಾವಿ ಲೋಕಸಭೆ ಕ್ಷೇತ್ರದ ಉಪ ಚುನಾವಣೆ ವೇಳೆ ಬಿಜೆಪಿಗೆ ಬೆಂಬಲ ನೀಡಿದ್ದ ಲಖನ್ ಜಾರಕಿಹೊಳಿ ಪರಿಷತ್ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದಾರೆ. ಲಖನ್ಗೆ ರಮೇಶ ಮತ್ತು ಬಾಲಚಂದ್ರ ಬೆಂಬಲ ನೀಡುತ್ತಿದ್ದಾರೆ ಎಂಬ ಚರ್ಚೆ ಗಳೂ ಮುನ್ನೆಲೆಗೆ ಬಂದಿವೆ. ಕಾಂಗ್ರೆಸ್‌ನಲ್ಲಿ ಶಾಸಕರಾಗಿದ್ದು, ನಂತರ ಬಿಜೆಪಿ ಸೇರಿರುವ ಹಾಸನದ ಡಾ. ಮಂಥರ್ ಗೌಡ ಅವರಿಗೆ ಕೊಡಗು ಟಿಕೆಟ್ ದೊರಕಿದೆ.

## ಬಿಜೆಪಿಗೆ ಹೆದರಿ ಪಟೇಲರಿಗೆ ಗೌರವ ತೋರಿದ ಕಾಂಗ್ರೆಸ್

**ಬೆಂಗಳೂರು:** ಬಿಜೆಪಿಗೆ ಹೆದರಿ ಕಾಂಗ್ರೆಸ್ಸಿನವರ ಸರ್ದಾರ್ ವಲ್ಲಭ ಭಾಯಿ ಪಟೇಲ್ ಅವರಿಗೆ ಗೌರವ ಸಲ್ಲಿಸಿದ್ದಾರೆ ಎಂದು ಬಿಜೆಪಿ ಶಾಸಕ ಎಂ.ಪಿ.ರೇಣುಕಾಚಾರ್ಯ ಟೀಕಿಸಿದ್ದಾರೆ.

ಮಾಜಿ ಪ್ರಧಾನಿ ದಿ. ಇಂದಿರಾ ಗಾಂಧಿ ಅವರ ಪುಣ್ಯಸ್ಮರಣೆ ಸಂದರ್ಭ ಕೆಪಿಸಿಸಿ ಕಚೇರಿಯಲ್ಲಿ ನಡೆದ ಕಾರ್ಯಕ್ರಮದ್ದು ಎನ್ನಲಾದ ವಿಡಿಯೊ ತುಣುಕೊಂದು ಸಾಮಾಜಿಕ ಮಾಧ್ಯಮಗಳಲ್ಲಿ ಮಂಗಳವಾರ ವೈರಲ್ ಆಗಿತ್ತು. ಅದನ್ನು ಉಲ್ಲೇಖಿಸಿ ರೇಣುಕಾಚಾರ್ಯ ಟೀಕೆ ಮಾಡಿದ್ದಾರೆ. ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿಕೆಶಿ ನಡುವಣ ಪಿಸು ಮಾತಿನ ದೃಶ್ಯ ವಿಡಿಯೊದಲ್ಲಿದೆ. ಇಬ್ಬರೂ ನಾಯಕರ ಹಿಂಬದಿಯಲ್ಲಿ ಇಂದಿರಾ ಗಾಂಧಿಯವರ ಭಾವಚಿತ್ರವಿದೆ. ಡಿಕೆಶಿ ಅವರನ್ನು ಉದ್ದೇಶಿಸಿ ಮಾತನಾಡಿದ ಸಿದ್ದರಾಮಯ್ಯ, ಪಟೇಲ್ ಅವರದ್ದೂ ಇವತ್ತು ಜನ್ಮದಿನವಂತೆ' ಎಂದಿದ್ದಾರೆ. ಇದಕ್ಕುತ್ತರಿಸಿದ ಡಿಕೆಶಿ, ಇದು ದಿನ (ಸ್ಮರಣೆ ಕಾರ್ಯಕ್ರಮ), ಅದು ಜನ್ಮದಿನ, ಫೋಟೊ ಇಡುವುದಿಲ್ಲ' ಎಂದಿದ್ದಾರೆ. ಆದರೆ, ಬಿಜೆಪಿಯವರು ಇದರ ಲಾಭ ಪಡೆಯಬಹುದು ಎಂದು ಸಿದ್ದರಾಮಯ್ಯ ಆತಂಕ ವ್ಯಕ್ತಪಡಿಸಿದ್ದಾರೆ.

## ಯಕೃತ್ ಕಸಿ ಚಿಕಿತ್ಸೆಗೆ ಆರ್ಥಿಕ ಸಿರಿಗೆರೆ ಶ್ರೀ ನೆರವು

**ಸಿರಿಗೆರೆ:** ಬಡ ಕುಟುಂಬದ 8 ವರ್ಷದ ದೀಕ್ಷಾಗೆ ತಾಯಿಯ ಯಕೃತ್ ಅನ್ನು ಕಸಿ ಮಾಡಲಾಗಿದ್ದು, ಈ ಶಸ್ತ್ರಚಿಕಿತ್ಸೆಗೆ ತರಳಬಾಳು ಬೃಹನ್ಮಠದ ಡಾ.ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ ತರಳಬಾಳು ಬೃಹನ್ಮಠದಿಂದ ₹ 1 ಲಕ್ಷ ನೆರವು ನೀಡಿ ಆಸರೆಯಾಗಿದ್ದಾರೆ.



ಚನ್ನಗಿರಿಯ ತರಳಬಾಳು ಶಾಲೆಯ ಎರಡನೇ ತರಗತಿಯ ಪಿ.ಎಸ್. ದೀಕ್ಷಾಗೆ ಕೆಲ ದಿನಗಳ ಹಿಂದೆ ರಕ್ತಸ್ರಾವವಾಗುತ್ತಿತ್ತು. ಪೋಷಕರಾದ ಪ್ರಸನ್ನಕುಮಾರ್ ಮತ್ತು ಶ್ರುತಿ ಅವರು ಶಿವಮೊಗ್ಗ ನಗರದ ಆಸ್ಪತ್ರೆಯ ವೈದ್ಯರು ಮಗುವನ್ನು ಪರೀಕ್ಷಿಸಿ, ಬೆಂಗಳೂರಿನ ಆಸ್ಟರ್ ಸಿಎಂಐ ಆಸ್ಪತ್ರೆಗೆ ದಾಖಲಿಸಿದ್ದರು. ಚಿಕಿತ್ಸೆಗೆ ₹ 20 ಲಕ್ಷ ವೆಚ್ಚವಾಗುತ್ತದೆ ಎಂದು ವೈದ್ಯರು ಹೇಳಿದರು. ಆಗ ಇಷ್ಟೊಂದು ದುಬಾರಿ ವೆಚ್ಚದ ಚಿಕಿತ್ಸೆ ಕೊಡಿಸಲು ಸಾಮಾನ್ಯ ವರ್ಗದ ದೀಕ್ಷಾ ಕುಟುಂಬದವರಿಗೆ ಕಷ್ಟವಾಗಿತ್ತು. ಇದನ್ನು ಶ್ರೀಗಳ ಗಮನಕ್ಕೆ ತಂದಾಗ ಚಿಕಿತ್ಸೆಗೆ ₹ 1 ಲಕ್ಷ ಮೊತ್ತದ ಚೆಕ್ ನೀಡಿದರು.

ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಶ್ರೀಗಳ ಸಲಹೆಯ ಮೇರೆಗೆ ಮುಖ್ಯಮಂತ್ರಿಗಳ ನಿಧಿಯಿಂದ ₹ 3 ಲಕ್ಷ ಹಣವನ್ನು ಚಿಕಿತ್ಸೆಗೆ ನೀಡಿದ್ದಾರೆ.

## ಸಮಾಚಾರ ಸಣ್ಣದಲ್ಲ

### ಗುಡ್ಡಾಪುರ ದಾನಮ್ಮ ಜಾತ್ರೆ ಡಿ.1ರಿಂದ

**ವಿಜಯಪುರ:** ಮಹಾರಾಷ್ಟ್ರದ ಸುಕ್ಷೇತ್ರ ಗುಡ್ಡಾಪುರ ದಾನಮ್ಮದೇವಿ ಜಾತ್ರೆ ಡಿ.1 ರಿಂದ 5 ರವರೆಗೆ ಜರುಗಲಿದೆ. ಕೋವಿಡ್ ಹಿನ್ನೆಲೆಯಲ್ಲಿ ಜಾತ್ರೆಯಲ್ಲಿ ಯಾವುದೇ ಅದ್ದೂರಿ ಇರುವುದಿಲ್ಲ. ಭಕ್ತರು ಸಹಕರಿಸಬೇಕು ಎಂದು ದಾನಮ್ಮದೇವಿ ಟ್ರಸ್ಟ್ ಕಮಿಟಿ ತಿಳಿಸಿದೆ. ಪಾದಯಾತ್ರೆ ಮೂಲಕ ಬಂದ ಭಕ್ತರು ವಾಸ್ತವ್ಯ ಮಾಡುವಂತಿಲ್ಲ, ಅನ್ನ ದಾಸೋಹಕ್ಕೆ ಅವಕಾಶವಿಲ್ಲ, ಜಡೆ ತೆಗೆಯುವುದು ಸೇರಿದಂತೆ ಯಾವುದೇ ಧಾರ್ಮಿಕ ಕಾರ್ಯಕ್ರಮ ಗಳು ನಡೆಸುವಂತಿಲ್ಲ, ಅಭಿಷೇಕ, ತೀರ್ಥ, ಮುಟ್ಟಿ ದರ್ಶನ ಮಾಡುವುದು, ವಾಸ್ತವ್ಯಕ್ಕೆ ಕೊಠಡಿಗಳ ಬಾಡಿಗೆ ಕೊಡುವುದು ರದ್ದಾಗಿರುತ್ತದೆ ಎಂದು ತಿಳಿಸಿದೆ.

### ಕಾರು-ಬೈಕ್ ಡಿಕ್ಕಿ; ಇಬ್ಬರ ದುರ್ಮರಣ

**ಚಾಮರಾಜನಗರ:** ಕಾರು-ಬೈಕ್ ಮುಖಾಮುಖಿ ಡಿಕ್ಕಿಯಾಗಿ ಸ್ಥಳದಲ್ಲೇ ಇಬ್ಬರು ಮೃತಪಟ್ಟಿರುವ ಘಟನೆ ಚಾಮರಾಜನಗರ ತಾಲೂಕಿನ ಬದನಗುಪ್ಪೆ-ಮುತ್ತಿಗೆ ಗ್ರಾಮದ ಇಂದು ಸಂಜೆ ನಡೆದಿದೆ. ಚಾಮರಾಜನಗರ ತಾಲೂಕಿನ ಬೇಡರಪುರ ಗ್ರಾಮದ ಅಶೋಕ್(32) ಹಾಗೂ ಮಹೇಶ್ (25) ಮೃತ ದುರ್ದೈವಿಗಳು. ನಂಜನಗೂಡಿನಿಂದ ಬರುತ್ತಿದ್ದ ಬೈಕ್ ಸವಾರರಿಗೆ ವೇಗವಾಗಿ ಬರುತ್ತಿದ್ದ ಕಾರು ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಇಬ್ಬರು ಅಸುನೀಗಿದ್ದಾರೆ. ಸ್ಥಳಕ್ಕೆ ಭೇಟಿ ನೀಡಿದ ಗ್ರಾಮಾಂತರ ಠಾಣೆ ಪೊಲೀಸರು ಚಾಲಕನನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

### ದುನಿಯಾ ವಿಜಯ್ ಬಂದರಷ್ಟೇ ಮದುವೆ

**ದಾವಣಗೆರೆ:** ಇಲ್ಲಿನ ರಾಮನಗರದ ಯುವತಿಯೊಬ್ಬರು ತಮ್ಮ ನೆಚ್ಚಿನ ನಟ ದುನಿಯಾ ವಿಜಯ್ ಬಂದು ಹಾರೈಸಿದರೆ ಮಾತ್ರ ಮದುವೆಯಾಗುವುದಾಗಿ ಹಟ ಹಿಡಿಯುವ ಮೂಲಕ ಅಭಿಮಾನ ಮೆರೆದಿದ್ದಾರೆ.

ರಾಮನಗರದ ಶಿವಾನಂದ ಭಜಂತ್ರಿ ಅವರ ಪುತ್ರಿ ಅನುಷಾ ಅವರ ವಿವಾಹವು ಸ್ವಗೃಹದಲ್ಲಿ ನವೆಂಬರ್ 29ರಂದು ಪ್ರಕಾಶ್ ಎಂಬ ಯುವಕನ ಜತೆ ನಿಗದಿಯಾಗಿದೆ. ದುನಿಯಾ ವಿಜಯ್ ಅವರ ಅಪ್ಪಟ ಅಭಿಮಾನಿಯಾಗಿರುವ ಅನುಷಾ ಅವರು ತಮ್ಮ ಮದುವೆಗೆ ನೆಚ್ಚಿನ ನಟ ಬರಲೇಬೇಕು ಎಂದು ದಾರಿ ಕಾಯುತ್ತಿದ್ದಾರೆ.

ಶಿವಾನಂದ ಭಜಂತ್ರಿ ಅವರೂ ದುನಿಯಾ ವಿಜಯ್ ಅವರ ಅಭಿಮಾನಿ. ತಾವು ಕಟ್ಟಿಸಿದ ಮನೆಗೆ 'ದುನಿಯಾ ಋಣ' ಎಂದು ಹೆಸರಿಟ್ಟಿದ್ದರು. ನೆಚ್ಚಿನ ನಟ ಬಂದು ಉದ್ಘಾಟನೆ ಮಾಡುವವರೆಗೂ ಗೃಹ ಪ್ರವೇಶ ಮಾಡುವುದಿಲ್ಲ ಎಂದು ಐದು ವರ್ಷಗಳ ಹಿಂದೆ ಪಟ್ಟು ಹಿಡಿದಿದ್ದರು. ಈ ವಿಚಾರ ತಿಳಿದು ದುನಿಯಾ ವಿಜಯ್ ಗೃಹಪ್ರವೇಶಕ್ಕೆ ಬಂದು ಹೋಗಿದ್ದರು. ಇದೀಗ ಶಿವಾನಂದ ಅವರ ಪುತ್ರಿಯೂ ನೆಚ್ಚಿನ ನಟ ಬಂದರೆ ಮಾತ್ರ ಮದುವೆ ಮಾಡಿಕೊಳ್ಳುವುದಾಗಿ ಪಟ್ಟು ಹಿಡಿದಿದ್ದಾಳೆ. ವಿವಾಹ ಆಮಂತ್ರಣ ಪತ್ರಿಕೆಯಲ್ಲೂ ತಮ್ಮ ಫೋಟೊ ಪಕ್ಕ ನೆಚ್ಚಿನ ನಟನ ಫೋಟೊವನ್ನು ಮುದ್ರಿಸಿದ್ದಾರೆ. ಈ ಸುದ್ದಿ ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ.

# ಎನ್‌ಇಪಿಯಲ್ಲಿ ದೇಶಭಕ್ತಿ, ಗುರುಕುಲ ಮಾತೃಭಾಷೆ ಅಧ್ಯಯನಕ್ಕೂ ಅವಕಾಶ



ಶಿವಮೊಗ್ಗದ ಪೆಸಿಟ್ ಕಾಲೇಜಿನಲ್ಲಿ ಬುಧವಾರ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅವರನ್ನು ಸಂಸದ ಬಿ.ವೈ.ರಾಘವೇಂದ್ರ ಸನ್ಮಾನಿಸಿದರು.

**ವಿಶ್ವವಾಣಿ ಸುದ್ದಿಮನೆ** ಶಿವಮೊಗ್ಗ

ನೂತನ ಶಿಕ್ಷಣ ನೀತಿಯಲ್ಲಿ ದೇಶ ಭಕ್ತಿ, ಗುರುಕುಲ ಶಿಕ್ಷಣ ಅಡಗಿದೆ. ದೇಶದಲ್ಲಿ ಸಾವಿರಾರು ಭಾಷೆಗಳಿವೆ. ಹೊಸ ಶಿಕ್ಷಣ ನೀತಿಯಲ್ಲಿ ಸ್ಥಳೀಯ ಶಿಕ್ಷಣಕ್ಕೂ ಒತ್ತು ನೀಡಲಾಗಿದೆ. ಮಾತೃಭಾಷೆಯಲ್ಲೇ ತಾಂತ್ರಿಕ ವಿಷಯ ಅಧ್ಯಯನ ಮಾಡಲು ಅವಕಾಶ ನೀಡಲಾಗಿದೆ. ಚೀನಾ, ಜರ್ಮನಿಯಂತೆ ನಮ್ಮಲ್ಲೂ ಮಾತೃಭಾಷೆಯ ಶಿಕ್ಷಣ ಪಡೆಯಲು ಅವಕಾಶ ನೀಡಲಾಗಿದೆ ಎಂದು ರಾಜ್ಯಪಾಲ ಥಾವರಚಂದ್ ಗೆಹಲೋತ್ ಹೇಳಿದರು.

ನೂತನ ರಾಷ್ಟ್ರೀಯ ಶಿಕ್ಷಣ ನೀತಿ ಅನುಷ್ಠಾನ ಕುರಿತು ನಗರದ ಪಿಇಎಸ್ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ವಿಚಾರಣ ಸಂಕಿರಣ ಉದ್ಘಾಟಿಸಿ ಮಾತನಾಡಿದ ಅವರು, ಮಧ್ಯಪ್ರದೇಶದಿಂದ ಕರ್ನಾಟಕಕ್ಕೆ ಬಂದಿರುವುದು ಸಂತಸ ತಂದಿದೆ. ಕನ್ನಡ ಭಾಷೆ, ನೆಲದ ಬಗ್ಗೆ ಗೌರವವಿದೆ. ಕರ್ನಾಟಕ ಭಾರತದಲ್ಲೇ ಅಗ್ರಮಾನ್ಯ ಸ್ಥಾನ ಪಡೆದಿದೆ. ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಎಲ್ಲ ರಾಜ್ಯಗಳಿಗಿಂತ ಅನುಷ್ಠಾನಗೊಳಿಸುತ್ತಿದೆ ಎಂದು ಶ್ಲಾಘಿಸಿದರು.

ಪ್ರಾಚೀನ ಶಿಕ್ಷಣ ಇತಿಹಾಸದಲ್ಲಿ ಭಾರತದ ಹೆಸರಿದೆ. ಶೂನ್ಯದ ಕೊಡುಗೆ, ಗಣಿತದಲ್ಲಿ ಭಾರತ ಸಾಧನೆ ಇದೆ. ಬಿಹಾರದ ನಳಂದ ವಿಶ್ವವಿದ್ಯಾಲಯ ಎಷ್ಟು ಪುರಾತನ ಎಂಬುದು ಎಲ್ಲರಿಗೂ ಗೊತ್ತಿದೆ. ಇತಿಹಾಸದ ಅಧ್ಯಯನಕ್ಕೆ ಹೆಚ್ಚು ಒತ್ತು ನೀಡಲಾಗುತ್ತಿದೆ ಎಂದರು.

ಶಿವಮೊಗ್ಗ ಜಿಲ್ಲೆಯ ಅಭಿವೃದ್ಧಿಗಾಗಿ ಬಿ.ಎಸ್.ಯಡಿಯೂರಪ್ಪ ಅವರು ಮುಖ್ಯಮಂತ್ರಿಯಾಗಿದ್ದಾಗ ಘೋಷಣೆ ಮಾಡಲಾಗಿದ್ದ ಆಯುಷ್ ವಿಶ್ವವಿದ್ಯಾಲಯಕ್ಕೆ ಸಚಿವ ಸಂಪುಟ ಒಪ್ಪಿಗೆ ನೀಡಿದೆ. ಅದಕ್ಕೆ ನಿಮ್ಮ ಅಂಕಿತದ ಅಗತ್ಯವಿದೆ. ಸಹಕಾರ ನೀಡಬೇಕು ಎಂದು ಸಂಸದ ಬಿ.ವೈ.ರಾಘವೇಂದ್ರ ಮನವಿ ಮಾಡಿದರು.

### ಗೆಹ್ಲೋಟ್‌ರಿಂದ ಸಿಂಹಧಾಮ ವೀಕ್ಷಣೆ

ತ್ಯಾವರೆಕೊಪ್ಪದ ಹುಲಿ ಮತ್ತು ಸಿಂಹಧಾಮ ವೀಕ್ಷಿಸಿದ ರಾಜ್ಯಪಾಲರು ಎರಡು ತಾಸು ಅಲ್ಲಿನ ಪ್ರಾಣಿ, ಪಕ್ಷಿಗಳನ್ನು ವೀಕ್ಷಿಸಿ ಖುಷಿಪಟ್ಟರು. ಧಾಮದ ಹುಲಿಯೊಂದರ ಚಟುವಟಿಕೆಗೆ ಬೆರಗಾದ ಅವರು ಮತ್ತೊಂದು ಸುತ್ತು ತಿರುಗಿದರು. ಧಾಮದ ಒಳಗೆ ಹುಲಿ, ಸಿಂಹಗಳ ವೀಕ್ಷಣೆಗಾಗಿ ಅವರಿಗಾಗಿಯೇ ಪ್ರತ್ಯೇಕ ವಾಹನವನ್ನು ಬಳ್ಳಾರಿಯಿಂದ ತರಿಸಲಾಗಿತ್ತು. ರಾತ್ರಿ ಜೋಗದ ಬ್ರಿಟಿಷ್ ಬಂಗ್ಲೆಯಲ್ಲಿ ತಂಗಿದರು.

## ಗೌರವಧನಕ್ಕೆ ಆಗ್ರಹಿಸಿ ಪ್ರವಾಸಿ ಮಾರ್ಗದರ್ಶಿಗಳಿಂದ ಪತ್ರ ಚಳವಳಿ

**ಹೊಸಪೇಟೆ:** ಹಂಪಿ ಸೇರಿದಂತೆ ಇತರ ಪ್ರವಾಸಿ ತಾಣಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರವಾಸಿ ಮಾರ್ಗದರ್ಶಿಗಳಿಗೆ ಮಾಸಿಕ ಗೌರವಧನ ನೀಡಬೇಕೆಂದು ಆಗ್ರಹಿಸಿ ಗೈಡ್‌ಗಳು ಬುಧವಾರ ಹಂಪಿಯಲ್ಲಿ ಪತ್ರ ಚಳವಳಿ ನಡೆಸಿದರು.

ಬಳಿಕ ಸಿಎಂ ಬೊಮ್ಮಾಯಿ ಅವರ ಹೆಸರಿಗೆ ಬರೆದ ಪತ್ರ ಗಳನ್ನು ಪೋಸ್ಟ್ ಮಾಡಿದರು. ಪ್ರವಾಸೋದ್ಯಮ ಇಲಾಖೆಯಿಂದ ಮಾರ್ಗದರ್ಶಿಗಳಿಗೆ ತರಬೇತಿ ಕೊಡಬೇಕು. ನೋಂದಾಯಿತ ಮಾರ್ಗದರ್ಶಿಗಳಿಗೆ ಅಗತ್ಯ ಸೌಲಭ್ಯ ಕಲ್ಪಿಸಬೇಕು' ಎಂದು ವಿದ್ಯಾರಣ್ಯ ಪ್ರವಾಸಿ ಮಾರ್ಗದರ್ಶಿಗಳ ಕ್ಷೇಮಾಭಿವೃದ್ಧಿ ಸಂಘ ಪದಾಧಿಕಾರಿಗಳು ಒತ್ತಾಯಿಸಿದರು.

ಎಲ್ಲ ಮಾರ್ಗದರ್ಶಿಗಳು ಪ್ರವಾಸಿಗರು ಕೊಡುವ ಹಣದಲ್ಲೇ ಕುಟುಂಬ ನಿರ್ವಹಣೆಯನ್ನು ಮಾಡುತ್ತಿದ್ದಾರೆ. ಸರಕಾರದಿಂದ ಆರ್ಥಿಕ ನೆರವು ಇಲ್ಲದೆ ಸಂಕಷ್ಟ ಎದುರಾಗಿದೆ. ವರ್ಷದಲ್ಲಿ ಹಲವು ತಿಂಗಳು ಪ್ರವಾಸಿಗರು ಭೇಟಿ ಕೊಡುವುದಿಲ್ಲ. ಈ ವೇಳೆ ಕಷ್ಟ ಎದುರಾಗುತ್ತದೆ. ಸರಕಾರ ಮಾಸಿಕ ಗೌರವಧನ ನಿಗದಿ ಮಾಡಿದರೆ ಅನುಕೂಲವಾಗುತ್ತದೆ. ಸಾಂಸ್ಕೃತಿಕ ರಾಯಭಾರಿಗಳಾಗಿ ಮಾರ್ಗದರ್ಶಿಗಳು ಕೆಲಸ ಮಾಡುತ್ತಿದ್ದಾರೆ. ಅವರ ಹಿತ ಕಾಪಾಡುವುದು ಸರಕಾರದ ಕರ್ತವ್ಯ ಎಂದು ಹೇಳಿದರು.



ಪ್ರವಾಸಿ ಮಾರ್ಗದರ್ಶಿಗಳು ಬುಧವಾರ ಹಂಪಿಯಲ್ಲಿ ಪತ್ರ ಚಳವಳಿ ನಡೆಸಿದರು.

## ಬಲೆಗೆ ಬಿದ್ದ ಘೋಲ್ ಮೀನು 1.90 ಲಕ್ಷ ರು.ಗೆ ಮಾರಾಟ

**ಉಡುಪಿ:** ಮಲ್ಪೆಯ ಮೀನುಗಾರ ಶಾನ್ರಾಜ್ ತೊಟ್ಟಂ ಅವರ ಬಲೆಗೆ 'ಘೋಲ್' ಮೀನು ಬಿದ್ದಿದೆ. 20 ಕೆ.ಜಿ ತೂಕದ ಮೀನು ಹರಾಜಿನಲ್ಲಿ ಬರೋಬ್ಬರಿ 1.90 ಲಕ್ಷ ರು.ಗೆ ಮಾರಾಟವಾಗಿದೆ. ಉದ್ಯಮಿ ಫಯಾಜ್ ಮೀನನ್ನು ಖರೀದಿಸಿದ್ದಾರೆ.

ಘೋಲ್ ಫಿಶ್ ಔಷಧೀಯ ಗುಣಗಳನ್ನು ಹೊಂದಿರುವ ಮೀನಾಗಿದ್ದು, ಅದರ ಉತ್ಪನ್ನಗಳು ಸೌಂದರ್ಯ ವರ್ಧಕ ಉತ್ಪನ್ನಗಳ ತಯಾರಿಕೆಯಲ್ಲಿ ಬಳಸಲಾಗುತ್ತದೆ. ಜತೆಗೆ, ಐಶಾರಾಮಿ ಹೋಟೆಲ್‌ಗಳಲ್ಲಿ ದೊರೆಯುವ ಘೋಲ್ ಫಿಶ್ ಮೀನಿನ ಖಾದ್ಯಕ್ಕೆ ಹೆಚ್ಚು ಬೇಡಿಕೆ ಇದೆ. ಘೋಲ್ ಫಿಶ್ ಹೆಚ್ಚಾಗಿ



ಸಮುದ್ರ ದಾಳದಲ್ಲಿ ಬದುಕುವ ಮೀನಾಗಿದ್ದು, ಕರಾವಳಿಯ ಸಮುದ್ರ, ಶ್ರೀಲಂಕಾ ಭಾಗದಲ್ಲಿ ಹೆಚ್ಚಾಗಿ ಕಾಣಿಸಿಕೊಳ್ಳತ್ತವೆ ಎನ್ನುತ್ತಾರೆ ತಜ್ಞರು. ಮತ್ತೊಂದೆಡೆ ನವೀನ್ ಸಾಲ್ಯಾನ್ ಎಂಬುವರಿಗೆ 30 ಕೆ.ಜಿ ತೂಕದ ಕಾಂಡ್ಯೆ ಮೀನು ಸಿಕ್ಕಿದೆ.

## ಪುತ್ರಿ ಮದುವೆ ಜತೆಗೆ 101 ಜೋಡಿ ಸಾಮೂಹಿಕ ವಿವಾಹ

**ವಿಜಯಪುರ:** ಪುತ್ರಿಯ ಮದುವೆಗಾಗಿ 101 ಜೋಡಿಗಳ ಸಾಮೂಹಿಕ ವಿವಾಹ ನೆರವೇರಿಸುವುದಾಗಿ ಮಾಜಿ ಸಚಿವ ಹಾಗೂ ಶಾಸಕ ಶಿವಾನಂದ ಪಾಟೀಲ್ ಘೋಷಣೆ ಮಾಡಿದ್ದಾರೆ.



ನಗರದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇದೇ ತಿಂಗಳ 29ರ ಸಂಜೆ 5.30ಕ್ಕೆ ಗೋಧೂಳಿ ಸಮಯದಲ್ಲಿ ಐತಿಹಾಸಿಕ ಬೇಗಂ ತಲಾಬ್‌ನಲ್ಲಿ ನನ್ನ ಪುತ್ರಿ ಸಂಯುಕ್ತಾಳ ಮದುವೆ ನಡೆಯಲಿದೆ ಎಂದು ತಿಳಿಸಿದರು.

ಇದೇ ಮದುವೆಯಲ್ಲಿ 101 ಜೋಡಿಗಳ ಸಾಮೂಹಿಕ ವಿವಾಹ ನಡೆಯಬೇಕೆಂಬುದು ನನ್ನ ಮಗಳ ಆಶಯವಾಗಿತ್ತು. ಆದರೆ ಕೋವಿಡ್ ಕಾರಣದಿಂದ ಇದಕ್ಕೆ ಅನುಮತಿ ಸಿಕ್ಕಿಲ್ಲ. ಹೀಗಾಗಿ ಮುಂದಿನ ವರ್ಷ ನಡೆಯುವ ಬಿಡಿಸಿಸಿ ಬ್ಯಾಂಕ್‌ನ 101ನೆ ವರ್ಷಾಚರಣೆ ಸಂದರ್ಭದಲ್ಲಿ ಸಾಮೂಹಿಕ ವಿವಾಹ ನಡೆಸುವುದಾಗಿ ಘೋಷಣೆ ಮಾಡಿದರು.

ಕೋವಿಡ್ ಹಿನ್ನೆಲೆಯಲ್ಲಿ ಸರಳವಾಗಿ ವಿವಾಹ ಮಹೋತ್ಸವ ನೆರವೇರಿಸುತ್ತಿರುವುದಾಗಿ ಮಾಹಿತಿ ನೀಡಿದರು. ಬಿಜಾಪುರ ಹಾಗೂ ಬಾಗಲಕೋಟೆಯಲ್ಲಿ ಕರೋನಾ ಸಮಯದಲ್ಲಿ ನೆರವೇರಿಸಲಾಗದೆ ನಿಂತಿರುವ ಮದುವೆಗಳಿಗೆ ಆದ್ಯತೆ ನೀಡುವುದಾಗಿ ತಿಳಿಸಿದರು.

ಜ್ಯಾತ್ಯತೀತವಾಗಿ ಎಲ್ಲ ಸಮುದಾಯದವರು ಹೆಸರು ನೋಂದಾಯಿಸಬಹುದು, ಶೀಘ್ರದಲ್ಲಿಯೇ ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಲಿದೆ ಎಂದು ಶಾಸಕ ಶಿವಾನಂದ ಪಾಟೀಲ್ ತಿಳಿಸಿದರು.

## ಡಾ.ಎಂ.ಎಂ.ಕಲಬುರ್ಗಿ ಹತ್ಯೆ: ಡಿ.20ರಿಂದ ವಿಚಾರಣೆ

**ಧಾರವಾಡ:** ಹಿರಿಯ ಸಂಶೋಧಕ ಡಾ.ಎಂ.ಎಂ.ಕಲಬುರ್ಗಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆಯನ್ನು ಇಲ್ಲಿನ 4ನೇ ಹೆಚ್ಚುವರಿ ಜಿಲ್ಲಾ ನ್ಯಾಯಾಲಯ ಡಿ.20 ಹಾಗೂ 21ಕ್ಕೆ ನಿಗದಿಪಡಿಸಿ ಬುಧವಾರ ಆದೇಶಿಸಿತು.

ಪ್ರಕರಣದ ಆರು ಆರೋಪಿಗಳಲ್ಲಿ ಧಾರವಾಡ ಕೇಂದ್ರ ಕಾರಾಗೃಹದಲ್ಲಿದ್ದ ಪ್ರವೀಣ ಚತರು ಹಾಗೂ ಮುಂಬೈನ ಆರ್ಥರ್ ರಸ್ತೆ ಜೈಲಿನಲ್ಲಿದ್ದ ಅಮಿತ ಬದ್ದಿ, ಗಣೇಶ ಮಿಸ್ಕಿನ್ ಹಾಗೂ ವಾಸುದೇವ ಸೂರ್ಯವಂಶಿಯನ್ನು ನ್ಯಾಯಾಲಯಕ್ಕೆ ಭಿಗಿ ಭದ್ರತೆಯಲ್ಲಿ ಕರೆತರಲಾಯಿತು.

ಪ್ರಕರಣದ ವಿಚಾರಣೆಯನ್ನು ಧಾರವಾಡದಲ್ಲೇ ನಡೆಸುವಂತೆ ಆರೋಪಿಗಳು ನ್ಯಾಯಾಲಯವನ್ನು ಕೇಳಿಕೊಂಡರು. ಜತೆಗೆ ತಮ್ಮನ್ನು ಭೇಟಿಯಾಗಲು ಬಂದ ಕುಟುಂಬದವರು ಹಾಗೂ ವಕೀಲರೊಂದಿಗೆ ಮಾತನಾಡಲು ಅವಕಾಶ ಕೋರಿದರು. ಇವುಗಳಲ್ಲಿ ಭೇಟಿ ಕೋರಿಕೆಯನ್ನು ಮಾನ್ಯ ಮಾಡಿದ ನ್ಯಾಯಾಧೀಶರು, ನ್ಯಾಯಾಲಯದ ಆವರಣದಲ್ಲೇ ಭೇಟಿಗೆ ಅವಕಾಶ ನೀಡಿದರು.

### ನ್ಯಾಯಾಲಯದ ಆವರಣದಲ್ಲಿ ಕೂಗು

ನ್ಯಾಯಾಲಯದಿಂದ ಹೊರಬಂದ ಆರೋಪಿಗಳು, 'ನಾವು ಅಮಾಯಕರು. ಎಸ್‌ಐಟಿ ಅಧಿಕಾರಿಗಳು ನಮ್ಮನ್ನು ಇದರಲ್ಲಿ ಸಿಲುಕಿಸಿದ್ದಾರೆ. ಪ್ರಜಾಪ್ರಭುತ್ವದ ಮೇಲೆ ನಮಗೆ ನಂಬಿಕೆ ಇದೆ. ನಾವೆಲ್ಲರೂ ಆರೋಪಮುಕ್ತರಾಗಿ ಹೊರಬರುತ್ತೇವೆ' ಎಂದು ಕೂಗಿದರು.



ಧಾರವಾಡದ ಜಿಲ್ಲಾ ನ್ಯಾಯಾಲಯದಲ್ಲಿ ಬಧವಾರ ನಡೆದ ವಿಚಾರಣೆ ನಂತರ ಆರೋಪಿಗಳನ್ನು ಪೊಲೀಸರು ಹೊರಕ್ಕೆ ಕರೆತಂದರು.

### ವಿಶೇಷ ಅಭಿಯೋಜಕರ ನೇಮಕ

ಮಹಾರಾಷ್ಟ್ರದ ವಿಚಾರವಾದಿಗಳಾದ ಗೋವಿಂದ ಪಾನ್ಸರೆ, ನರೇಂದ್ರ ದಾಭೋಲ್ಕರ್ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿ ಆರೋಪಿಗಳನ್ನು ಮುಂಬೈನ ಕೇಂದ್ರ ಕಾರಾಗೃಹಕ್ಕೆ ಮರಳಿಸುವಂತೆ ಅನುಮತಿ ಕೋರಿ ಅರ್ಜಿಯೂ ನ್ಯಾಯಾಲಯಕ್ಕೆ ಸಲ್ಲಿಕೆಯಾಯಿತು. ಪ್ರಕರಣದ ವಿಚಾರಣೆ ಶೀಘ್ರ ನಡೆಸಬೇಕು ಎಂಬ ಹೈಕೋರ್ಟ್ ಸೂಚಿಸಿದ್ದರಿಂದ ವಿಶೇಷ ಅಭಿಯೋಜಕರನ್ನೂ ಸರಕಾರ ನೇಮಕ ಮಾಡಿದೆ.


ಕಾರ್ಮಿಕರ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಗಳ ನಿರ್ದೇಶನಾಲಯ

ಎಸ್. ನಿಜಲಿಂಗಪ್ಪ ರಸ್ತೆ, ರಾಜಾಜಿನಗರ 2ನೇ ಬ್ಲಾಕ್, ಬೆಂಗಳೂರು – 560010.
ಟೆಲಿಫ್ಯಾಕ್ಸ್ : 080–23324216 / 23328105, ವೆಬ್‌ಸೈಟ್:https://www.esisms.karnataka.gov.in

E.S.I.S(M) SERVICES KARNATAKA

ಸಂಖ್ಯೆ : ಹೊ.ಗು./01/2021–22 ದಿನಾಂಕ : 23.11.2021

**ಈ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ತಾಂತ್ರಿಕ ಹಾಗೂ ಅರೆವೈದ್ಯಕೀಯ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಲು ಟೆಂಡರ್ ಪ್ರಕಟಣೆ**

| ಕ್ರ. ಸಂ. | ಹುದ್ದೆಗಳು | ಹುದ್ದೆಗಳ ಸಂಖ್ಯೆ | ಕ್ರ. ಸಂ. | ಹುದ್ದೆಗಳು | ಹುದ್ದೆಗಳ ಸಂಖ್ಯೆ |
|---|---|---|---|---|---|
| 1. | Staff Nurse | 120 | 5. | Radiographer | 07 |
| 2. | Senior Lab Technician | 01 | 6. | Junior Radiographer | 04 |
| 3. | Junior Lab Technician | 32 | 7. | X-ray Technician | 04 |
| 4. | Physiotherapist | 01 | | ಒಟ್ಟು ಹುದ್ದೆಗಳ ಸಂಖ್ಯೆ | 169 |

| | |
|---|---|
| ಪ್ರಕಟಣೆ ಸಂಖ್ಯೆ ಮತ್ತು ದಿನಾಂಕ | Outsource/01/2021-22 ದಿ: 23.11.2021 |
| ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ | 24.12.2021 ಸಂಜೆ 4.30 ಗಂಟೆಯವರೆಗೆ |
| ತಾಂತ್ರಿಕ ಬಿಡ್‌ಗಳನ್ನು ತೆರೆಯುವ ದಿನಾಂಕ | 28.12.2021 ಬೆಳಗ್ಗೆ 11.30 ಗಂಟೆಗೆ |
| ಪೂರ್ವಭಾವಿ ಸಭೆ ದಿನಾಂಕ | 15.12.2021 ಬೆಳಗ್ಗೆ 11.00 ಗಂಟೆಗೆ ನಿರ್ದೇಶನಾಲಯದ ಕಛೇರಿ, ಕಾರ್ಮಿಕರ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಗಳು |
| ಟೆಂಡರ್ ತೆರೆಯುವ ಸ್ಥಳ | ಕಾರ್ಮಿಕರ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಗಳ ನಿರ್ದೇಶನಾಲಯ |
| ಟೆಂಡರ್‌ನ ಹೆಚ್ಚಿನ ಮಾಹಿತಿಗಾಗಿ ಇ–ಪ್ರೊಕ್ಯೂರ್‌ಮೆಂಟ್ ವೆಬ್‌ಸೈಟ್ ನೋಡಿ | www.eproc.karnataka.gov.in & https://www.esisms.karnataka.gov.in |

ಹೆಚ್ಚಿನ ಮಾಹಿತಿಗಾಗಿ ಕೆಳಸಹಿದಾರರ ಕಛೇರಿಯನ್ನು ಸಂಪರ್ಕಿಸಬಹುದು.

ಸಹಿ/– ನಿರ್ದೇಶಕರು
ಕಾರ್ಮಿಕರ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಗಳು

ವಾಸಾಸಂಇ/ಬೆಂನ/ಜಿಎ/2207/2021–22

ಕೋವಿಡ್-19 - ಗಾಳಿಸುದ್ದಿ ಹರಡಬೇಡಿ, ಜವಾಬ್ದಾರಿಯಿಂದ ವರ್ತಿಸಿ, ಸೋಂಕನ್ನು ದೂರವಿಡಿ-ಸೋಂಕಿತರನ್ನಲ್ಲ.

ಮಾಸ್ಕ್ ಧರಿಸಿ | 6 ಅಡಿ ದೈಹಿಕ ಅಂತರ ಪಾಲಿಸಿ | ಕೈಗಳ ಸ್ವಚ್ಛತೆ ಕಾಪಾಡಿಕೊಳ್ಳಿ


# ಎಂಟು ವರ್ಷದ ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರ: ನಾಲ್ವರು ಆರೋಪಿಗಳ ಬಂಧನ

**ಮಂಗಳೂರು:** ನಗರ ಹೊರವಲಯದ ಉಳಾಯಿಬೆಟ್ಟು ಟೈಲ್ಸ್ ಫ್ಯಾಕ್ಟರಿಯಲ್ಲಿ ಕೆಲಸಕ್ಕಿದ್ದ ಜಾರ್ಖಂಡನ ಕುಟುಂಬದ ಎಂಟು ವರ್ಷದ ಹೆಣ್ಣು ಮಗುವಿನ ಕೊಲೆ ಪ್ರಕರಣದ ನಾಲ್ವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಕೊಲೆಗೂ ಮುನ್ನ ಬಾಲಕಿಯ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿರುವುದನ್ನು ಆರೋಪಿಗಳು ಒಪ್ಪಿಕೊಂಡಿದ್ದಾರೆ.

ಮಧ್ಯಪ್ರದೇಶದ ಮೂವರು ಹಾಗೂ ಜಾರ್ಖಂಡ್ ರಾಜ್ಯದ ಒಬ್ಬ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಇವರೆಲ್ಲರೂ ಅದೇ ಫ್ಯಾಕ್ಟರಿಯಲ್ಲಿ ಕೆಲಸ ಮಾಡುವ ಕಾರ್ಮಿಕರಾಗಿದ್ದಾರೆ.

ಬಡ ಕುಟುಂಬದ ಬಾಲಕಿಯ ಮೇಲೆ ಕಣ್ಣಿಟ್ಟಿದ್ದ ಆರೋಪಿಗಳು ಭಾನುವಾರ (ನ.21) ಮಧ್ಯಾಹ್ನ ಆಟವಾಡುತ್ತಿದ್ದ ಬಾಲಕಿಯನ್ನು ಅದೇ ಕಾರ್ಖಾನೆಯ ಆವರಣದಲ್ಲಿದ್ದ ರೂಂಗೆ ಕರೆದೊಯ್ದಿದ್ದಾರೆ. ನಂತರ ಬಾಲಕಿಯ ಮೇಲೆ ಮೂವರು ಅತ್ಯಾಚಾರ ನಡೆಸಿದ್ದಾರೆ.

ಇದರಿಂದ ಬಾಲಕಿಗೆ ಆಘಾತ ಆಗಿದ್ದು, ತೀವ್ರ ರಕ್ತಸ್ರಾವವಾಗಿದೆ. ಬಾಲಕಿ ಕಿರಚಾಡಲು ಆರಂಭಿಸಿದ್ದು, ಒಬ್ಬ ಆರೋಪಿ ಬಾಲಕಿಯ ಕತ್ತು ಹಿಸುಕಿ ಕೊಲೆ ಮಾಡಿದ್ದಾನೆ. ನಂತರ ಕೃತ್ಯದ ಬಳಿಕ ಸಾಕ್ಷ್ಯ ನಾಶ ಮಾಡುವ ಉದ್ದೇಶದಿಂದ ನೀರು ಹರಿಯುವ ಚರಂಡಿಗೆ ಬಾಲಕಿಯ ಶವವನ್ನು ಎಸೆದಿದ್ದಾರೆ.

ಸಂಜೆ ನಾಲ್ಕು ಗಂಟೆಗೆ ಬಾಲಕಿ ಕಾಣಿಸದೇ ಇರುವುದರಿಂದ ಪಾಲಕರು ಹುಡುಕಾಟ ಆರಂಭಿಸಿದ್ದರು. ಟೈಲ್ಸ್ ಫ್ಯಾಕ್ಟರಿಯ ಸ್ವಲ್ಪ ದೂರದಲ್ಲಿರುವ ನೀರು ಹರಿಯುವ ಚರಂಡಿಯಲ್ಲಿ ಸಂಜೆ 6 ಗಂಟೆಗೆ ಬಾಲಕಿಯ ಶವ ಪತ್ತೆಯಾಗಿತ್ತು.

ಟೈಲ್ಸ್ ಫ್ಯಾಕ್ಟರಿಯಲ್ಲಿ 30 ಜನರು ಕೆಲಸ ಮಾಡುತ್ತಿದ್ದಾರೆ. ಭಾನುವಾರ ಆಗಿದ್ದರಿಂದ 19 ಜನ ಕೆಲಸಕ್ಕೆ ಬಂದಿದ್ದರು. ಇದರಲ್ಲಿ ಬಹುತೇಕ ಜನರು ಉತ್ತರ ಭಾರತದವರೇ ಆಗಿದ್ದಾರೆ. ಕೃತ್ಯ ನಡೆದ ದಿನವೇ 10ರಿಂದ 15 ಮಂದಿಯನ್ನು ವಶಕ್ಕೆ ಪಡೆದು ಪೊಲೀಸರು ವಿಚಾರಣೆ ನಡೆಸಿದ್ದರು.



ಮಂಗಳೂರು ಪೊಲೀಸರು ಬಂಧಿಸಿರುವ ಮಧ್ಯಪ್ರದೇಶದ ಮೂವರು ಹಾಗೂ ಜಾರ್ಖಂಡ್ ರಾಜ್ಯದ ಒಬ್ಬ ಆರೋಪಿಗಳು.

ಸೂಕ್ತ ಸಾಕ್ಷಿಗಳನ್ನು ಸಂಗ್ರಹಿಸಿ ಇದೀಗ ನಾಲ್ವರು ಆರೋಪಿಗಳನ್ನು ಬಂಧಿಸಲಾಗಿದೆ ಎಂದು ನಗರ ಪೊಲೀಸ್ ಕಮಿಷನರ್ ಎನ್. ಶಶಿಕುಮಾರ್ ತಿಳಿಸಿದ್ದಾರೆ.

## ಸಿಎಂ ಕಚೇರಿಯ ಇಬ್ಬರಿಗೆ ಕರೋನಾ

**ಬೆಂಗಳೂರು:** ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಗೃಹ ಕಚೇರಿ ಕೃಷ್ಣಾದ ಇಬ್ಬರು ಅಧಿಕಾರಿಗಳಿಗೆ ಕರೋನಾ ಕಾಣಿಸಿಕೊಂಡಿದೆ. ಈ ಹಿನ್ನೆಲೆಯಲ್ಲಿ ಗೃಹ ಕಚೇರಿಯನ್ನು ತಾತ್ಕಲಿಕವಾಗಿ ರೇಸ್‌ಕೋರ್ಸ್ ರಸ್ತೆಯ ನಿವಾಸಕ್ಕೆ ಸ್ಥಳಾಂತರಿಸಲಾಗಿದೆ.

ಇಬ್ಬರು ಅಧಿಕಾರಿಗಳಿಗೆ ಕರೋನಾ ದೃಢಪಟ್ಟಿರುವುದರಿಂದ ಮುಖ್ಯಮಂತ್ರಿಗಳ ಗೃಹ ಕಚೇರಿಯನ್ನು ಸ್ಯಾನಿಟೈಸ್ ಮಾಡಲಾಗಿದೆ. ಇತರ ಸಿಬ್ಬಂದಿಯನ್ನು ಕರೋನಾ ಪರೀಕ್ಷೆಗೊಳಪಡಿಸಲಾಗಿದೆ.

ಕೃಷ್ಣಾದಲ್ಲಿ ಪೊಲೀಸ್ ಸಿಬ್ಬಂದಿ ಸೇರಿದಂತೆ ಸುಮಾರು 50 ಸಿಬ್ಬಂದಿ ಮತ್ತು ವಿಧಾನಸೌಧದ ಮುಖ್ಯಮಂತ್ರಿಗಳ ಕಾರ್ಯಾಲಯದಲ್ಲಿ 50 ನೌಕರರಿದ್ದಾರೆ. ಈ ಪೈಕಿ ಕುಮಾರ ಕೃಪಾ ರಸ್ತೆಯಲ್ಲಿನ ಗೃಹ ಕಚೇರಿ ಕೃಷ್ಣಾದಲ್ಲಿ ಕೆಲಸ ಮಾಡುವ ಇಬ್ಬರು ಸಿಬ್ಬಂದಿಗೆ ಕರೋನಾ ಪಾಸಿಟಿವ್ ಆಗಿರುವುದಾಗಿ ಮುಖ್ಯಮಂತ್ರಿಗಳ ಕಾರ್ಯಾಲಯದ ಮೂಲಗಳು ತಿಳಿಸಿವೆ.

ಆದ್ದರಿಂದ ಕೃಷ್ಣಾದಲ್ಲಿ ನಿಗದಿಯಾಗಿದ್ದ ಎಲ್ಲಾ ಸಭೆಗಳನ್ನು ಮುಖ್ಯಮಂತ್ರಿಗಳ ಅಧಿಕೃತ ನಿವಾಸಕ್ಕೆ ಸ್ಥಳಾಂತರಿಸಲಾಗಿದೆ. ಮುಖ್ಯಮಂತ್ರಿ ಸೇರಿದಂತೆ ಅವರ ಕಚೇರಿಯ ಎಲ್ಲಾ ಅಧಿಕಾರಿಗಳನ್ನು ಪರೀಕ್ಷೆಗೊಳಪಡಿಸಲಾಗಿದೆ. ಎಲ್ಲರಿಗೂ ನೆಗೆಟಿವ್ ವರದಿ ಬಂದಿದೆ.